ಕರ್ನಾಟಕ ವಿಧಾನ ಸಭೆ

ಬುಧವಾರ, ೧೧ನೇ ಸೆಪ್ಟೆಂಬರ್ ೧೯೮೫

ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ ಬೆಳಿಗ್ಗೆ ಒಂಭತ್ತು ಘಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು (ಶ್ರೀ ಬಿ. ಜಿ. ಬಣಕಾರ್) ಅವರು ಅಧ್ಯಕ್ಷ ಪೀಠವನ್ನು ಅಲಂಕರಿಸಿದ್ದರು.

ಚುಕ್ಕೆಗುರುತಿನ ಹಾಗೂ ಚುಕ್ಕೆಗುರುತಿಲ್ಲದ ಪ್ರಶ್ನೋತ್ತರಗಳ **ಪಟ್ಟಿ**ಯ ಮಂಡನೆ.

ಅಧ್ಯಕ್ಷರು.—ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಗಳ ಳಳ(೨) ನೇ ನಿಯಮದ ಮೇರೆಗೆ ೧೧-೯-೧೯೮೫ನೇ ದಿನಾಂಕದ ಚುಕ್ಕೆ ಗುರುತಿನ ಹಾಗೂ ಚುಕ್ಕೆ ಗುರುತಿಲ್ಲದ ಪ್ರಶ್ನೆಗಳ ಪಟ್ಟಿಯನ್ನು ಸಭೆಯ ಮುಂದಿಡುವುದು.

ಶ್ರೀ ಎ. ಲಕ್ಷ್ಮೀಸಾಗರ್.—ಅಧ್ಯಕ್ಷರೆ, ಚುಕ್ಕೆ ಹಾಗೂ ಚುಕ್ಕೆ ಗುರುತ್ತಿಲ್ಲದ ಪ್ರಶ್ನೋತ್ತರಗಳ ಪಟ್ಟಿಯನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು.—ಪ್ರಶ್ನೋತ್ತರಗಳ ಪಟ್ಟಿಯನ್ನು ಮಂಡಿಸಲಾಯಿತು.

ರಾಣೆಬೆನ್ನೂರು ತಾಲ್ಲೂಕಿನ ತುಮ್ಮಿನಕಟ್ಟೆ ಗ್ರಾಮಕ್ಕೆ ಕುಡಿಯುವ ನೀರನ್ನು ಒದಗಿಸುವುದು

೬೪೩(೧೧೪೪) ಶ್ರೀ ಕೆ. ಬಿ. ಕೋಳಿವಾಡ್ (ರಾಣೆಬೆನ್ನೂರು) ಮಾನ್ಯ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್‌ರಾಜ್ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ:—

ಅ) ರಾಣೆಬೆನ್ನೂರು ತಾಲ್ಲೂಕಿನ ತುಮ್ಮಿನ ಕಟ್ಟೆ ಗ್ರಾಮಕ್ಕೆ ತುಂಗಭದ್ರಾ ನದಿಯಿಂದ ನೀರು ಪೂರೈಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೆ ?

ಆ) ಭೂ ವಿಜ್ಞಾನಿಗಳು ಈ ಗ್ರಾಮದಲ್ಲಿ ಕೊಳವೆ ಬಾವಿಗಳು ಫಲಪ್ರದವಾಗುವುದಿಲ್ಲವೆಂದು ಮತ್ತು ನೀರು ಬರುವುದಿಲ್ಲವೆಂದು ವರದಿ ಕೊಟ್ಟಿರುವುದು ನಿಜವೇ ?

ಇ) ಹಾಗಿದ್ದಲ್ಲಿ ಈ ಗ್ರಾಮಕ್ಕೆ ತುಂಗಭದ್ರಾ ನದಿಯಿಂದ ನೀರು ಪೂರೈಸಲು ಅಂದಾಜು ಪಟ್ಟಿ ತಯಾರಿಸಲಾಗಿದೆಯೇ ? ಹಾಗಿದ್ದಲ್ಲಿ ಅದರ ಅಂದಾಜು ವೆಚ್ಚವೆಷ್ಟು ?

ಈ) ಈ ಯೋಜನೆಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು ?

ಶ್ರೀ ಅಬ್ದುಲ್ ನಜೀರ್ ಸಾಬ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು).—

ಅ) ಇಲ್ಲ

ಆ) ಇಲ್ಲ

ಇ) ಇಲ್ಲ

ಈ) ಈ ಪ್ರಶ್ನೆ ಉದ್ಭವಿಸುವುದಿಲ್ಲ.